# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 80 (782) |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 26-12-2022 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಪದವಿ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರಿಗೆ ಇತ್ತೀಚೆಗೆ ವೇತನ ಪರಿಷ್ಕರಣೆ ಮಾಡಲಾಗಿದೆಯೇ; ವೇತನ ಪರಿಷ್ಕರಣೆ, ನೇಮಕಾತಿ ಹಾಗೂ ಇವರಿಗೆ ನೀಡುವ ಸಲವತ್ತುಗಳು ಯಾವುವು; (ವಿವರಗಳೊಡನೆ ಮಾಹಿತಿ ನೀಡುವುದು) | ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು ತಿದ್ದುಪಡಿ ಆದೇಶ ದಿನಾಂಕ: 24.01.2022 ರನ್ವಯ ಮಾಹೆಯಾನ ಗೌರವಧನವನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಪರಿಷ್ಕರಿಸಿ ಈ ಕೆಳಗಿನಂತೆ ನಿಗದಿಪಡಿಸಲಾಗಿದೆ;<br><br>• 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-.<br><br>• 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-.<br><br>• 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-.<br><br>• 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-.<br><br>ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ |

| | | |
|---|---|---|
| | | ಕಾರ್ಯಭಾರದ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಲಾಗಿದೆ. ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಪ್ರಾಧಾನ್ಯತೆ ನೀಡಲಾಗಿದೆ.<br><br>ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್‌ಗೆ ಬದಲಾಗಿ ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ) ನೇಮಕ ಮಾಡಿಕೊಳ್ಳಲಾಗುತ್ತಿದೆ. ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 03 ವರ್ಷಗಳ ಕಾಲಾವಕಾಶ ನೀಡಲಾಗಿದೆ.<br><br>ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ಯುಜಿಸಿ ಮಾರ್ಗಸೂಚಿಯನ್ವಯ ವಿದ್ಯಾರ್ಹತೆಯನ್ನು ಪರಿಗಣಿಸಿ ಆಯಾಯ ವಿಶ್ವವಿದ್ಯಾಲಯಗಳ ಹಂತದಲ್ಲಿಯೇ ವೇತನ ಪರಿಷ್ಕರಣೆಯನ್ನು ಮಾಡಿಕೊಳ್ಳಲಾಗುತ್ತಿದೆ. ವಿಶ್ವವಿದ್ಯಾಲಯಗಳು ನೀಡಿರುವ ವಸ್ತುಸ್ಥಿತಿಯ ಮಾಹಿತಿಯನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. |
| ಆ) | 2022-23ನೇ ಸಾಲಿನಲ್ಲಿ ಎಷ್ಟು ಮಂದಿ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ; (ವಿವರ ನೀಡುವುದು) | 2022-23ನೇ ಸಾಲಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡಿರುವುದಿಲ್ಲ. ಆದರೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಹಿಂದಿನ 2021-22ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು 2022-23ನೇ ಸಾಲಿನ ಕಾರ್ಯಭಾರಕ್ಕನುಗುಣವಾಗಿ ಬೋಧನಾ ಕಾರ್ಯವನ್ನು ನಿರ್ವಹಿಸುತ್ತಿದ್ದು, ಅದರಂತೆ, ಪ್ರಸ್ತುತ ಒಟ್ಟು 9461 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ.<br><br>ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದಂತೆ, ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಮಾಹಿತಿಯನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ. |
| ಇ) | ಪ್ರಸಕ್ತ ಸಾಲಿನ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಗೊಂದಲ ಉಂಟಾಗಿರುವುದು | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಗೊಂದಲ ಉಂಟಾಗಿರುವುದು ಸರ್ಕಾರದ |

| | | |
|---|---|---|
| | ಸರ್ಕಾರದ ಗಮನಕ್ಕೆ ಬಂದಿದೆಯೇ; | ಗಮನಕ್ಕೆ ಬಂದಿರುತ್ತದೆ. |
| ಈ) | ಬಂದಿದ್ದಲ್ಲಿ, ಗೊಂದಲ ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಈ ಹಿಂದೆ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿ, ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗದ ಅಭ್ಯರ್ಥಿಗಳು ಮಾನ್ಯ ರಾಜ್ಯ ಉಚ್ಛ ನ್ಯಾಯಾಲಯದ ಮೂರು ಪೀಠಗಳಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿ, ತಮ್ಮನ್ನು ಅತಿಥಿ ಉಪನ್ಯಾಸಕರ ಸೇವೆಯಲ್ಲಿ ಮುಂದುವರೆಸುವಂತೆ ಕೋರಿದ್ದು, ಅದರಂತೆ ಮಾನ್ಯ ನ್ಯಾಯಾಲಯವು ವಿವಿಧ ದಿನಾಂಕಗಳಲ್ಲಿ ನೀಡಿರುವ ಮಧ್ಯಂತರ ಆದೇಶದಲ್ಲಿ ಅವರ ಸೇವೆಯನ್ನು ಮುಂದುವರೆಸಲು ನಿರ್ದೇಶನ ನೀಡಲಾಗಿರುತ್ತದೆ. ಅಲ್ಲದೆ, ಕೌನ್ಸಿಲಿಂಗ್‌ನಲ್ಲಿ ಆಯ್ಕೆಯಾಗದ ಅತಿಥಿ ಉಪನ್ಯಾಸಕರು ತಮ್ಮನ್ನು ಸೇವೆಯಲ್ಲಿ ಮುಂದುವರೆಸಲು ತಂದ ಮಧ್ಯಂತರ ಆದೇಶದಿಂದಾಗಿ ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗಿದ್ದಾಗ್ಯೂ ಕಾರ್ಯಭಾರದ ಕೊರತೆಯಿಂದಾಗಿ ಬಿಡುಗಡೆ ಹೊಂದಿದ್ದ ಹಲವಾರು ಅತಿಥಿ ಉಪನ್ಯಾಸಕರು ಸಹ ಮಾನ್ಯ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿ, ತಮ್ಮ ಸೇವೆಯನ್ನು ಮುಂದುವರೆಸುವಂತೆ ಮಧ್ಯಂತರ ಆದೇಶ ಪಡೆದಿರುತ್ತಾರೆ. ಸದರಿ ರಿಟ್ ಅರ್ಜಿಗಳು ನ್ಯಾಯಾಲಯದಲ್ಲಿ ಬಾಕಿ ಇದ್ದು, ಅಂತಿಮ ತೀರ್ಪನ್ನು ನಿರೀಕ್ಷಿಸಲಾಗಿರುತ್ತದೆ.<br><br>ಈ ಹಿನ್ನೆಲೆಯಲ್ಲಿ, ಪ್ರಸಕ್ತ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಹೊಸದಾಗಿ ತೆಗೆದುಕೊಂಡಿರುವುದಿಲ್ಲ ಹಾಗೂ ಈ ಹಿಂದಿನ 2021-22ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರ ಸೇವಾ ಅವಧಿಯನ್ನು ಡಿಸೆಂಬರ್ 2022 ರ ಅಂತ್ಯದವರೆಗೆ ವಿಸ್ತರಿಸಲು ಅನುಮೋದಿಸಲಾಗಿರುತ್ತದೆ. |
| ಉ) | ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ರಜೆ ಹಾಗೂ ಇನ್ನಿತರ ಸೌಲಭ್ಯ ಕಲ್ಪಿಸಲು ಸರ್ಕಾರ ಚಿಂತಿಸುವುದೇ; | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ ನಿಯಮಾವಳಿಗಳು ಹಾಗೂ ಇಲಾಖೆಯ ವೃಂದ & ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮಾತ್ರ ಅವಕಾಶವಿದ್ದು, ಕಾರ್ಯಭಾರವಿದ್ದಲ್ಲಿ ಅವಶ್ಯಕತೆಗನುಸಾರ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ, ರಜೆ ಹಾಗೂ ಸೌಲಭ್ಯಗಳನ್ನು ಕಲ್ಪಿಸಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |
| ಊ) | ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗುವುದು. | |

ಇಡಿ 329 ಡಿಸಿಇ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಇವರ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 80 (782) ಕ್ಕೆ ಪೂರಕ ಟಿಪ್ಪಣಿ.**

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು ಆಯಾ ಶೈಕ್ಷಣಿಕ ವರ್ಷಕ್ಕೆ ಮಾತ್ರ ಸೀಮಿತಗೊಳಿಸಿ, ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗುತ್ತಿದೆ.

ಅತಿಥಿ ಉಪನ್ಯಾಸಕರಿಗೆ ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಗರಿಷ್ಟ 8 ಗಂಟೆಗಳ ಕಾರ್ಯಭಾರವನ್ನು ಮತ್ತು ವಿಜ್ಞಾನ & ಪ್ರಾಯೋಗಿಕ ತರಗತಿಗಳನ್ನು ನಿರ್ವಹಿಸುವ ವಿಷಯಗಳಲ್ಲಿ ಗರಿಷ್ಠ 10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು. ಅದರಂತೆ ಅತಿಥಿ ಉಪನ್ಯಾಸಕರಿಗೆ ರೂ.13,000/- (ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ) ಮತ್ತು ರೂ.11,000/- (ಯು.ಜಿ.ಸಿ. ವಿದ್ಯಾರ್ಹತೆ ಹೊಂದಿಲ್ಲದವರಿಗೆ) ಗಳ ಸಂಭಾವನೆಯನ್ನು ನಿಗಧಿಪಡಿಸಲಾಗಿತ್ತು.

ಪ್ರಸ್ತುತ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರನ್ವಯ ಮಾಹೆಯಾನ ಗೌರವಧನವನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಪರಿಷ್ಕರಿಸಿ ಈ ಕೆಳಗಿನಂತೆ ನಿಗದಿಪಡಿಸಲಾಗಿದೆ;

- 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-.

- 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-.

- 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-.

- 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-.

ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಕಾರ್ಯಭಾರದ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಲಾಗಿದೆ. ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಪ್ರಾಧಾನ್ಯತೆ ನೀಡಲಾಗಿದ್ದು, ಅವರನ್ನು ಸೆಮಿಸ್ಟರ್‌ಗೆ ಬದಲಾಗಿ ಶೈಕ್ಷಣಿಕ ವರ್ಷಕ್ಕೆ(10 ತಿಂಗಳಿಗೆ) ನೇಮಕ ಮಾಡಿಕೊಳ್ಳಲಾಗುತ್ತಿದೆ. ಅಲ್ಲದೆ, ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 03 ವರ್ಷಗಳ ಕಾಲಾವಕಾಶ ನೀಡಲಾಗಿದೆ.

ಈ ಹಿಂದೆ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿ, ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗದ ಅಭ್ಯರ್ಥಿಗಳು ಮಾನ್ಯ ರಾಜ್ಯ ಉಚ್ಛ ನ್ಯಾಯಾಲಯದ ಮೂರು ಪೀಠಗಳಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿ, ತಮ್ಮನ್ನು ಅತಿಥಿ ಉಪನ್ಯಾಸಕರ ಸೇವೆಯಲ್ಲಿ ಮುಂದುವರೆಸುವಂತೆ ಕೋರಿದ್ದು, ಅದರಂತೆ ಮಾನ್ಯ ನ್ಯಾಯಾಲಯವು ವಿವಿಧ ದಿನಾಂಕಗಳಲ್ಲಿ ನೀಡಿರುವ ಮಧ್ಯಂತರ ಆದೇಶದಲ್ಲಿ ಅವರ ಸೇವೆಯನ್ನು ಮುಂದುವರೆಸಲು ನಿರ್ದೇಶನ ನೀಡಲಾಗಿರುತ್ತದೆ. ಅಲ್ಲದೆ, ಕೌನ್ಸಿಲಿಂಗ್‌ನಲ್ಲಿ ಆಯ್ಕೆಯಾಗದ ಅತಿಥಿ ಉಪನ್ಯಾಸಕರು ತಮ್ಮನ್ನು ಸೇವೆಯಲ್ಲಿ ಮುಂದುವರೆಸಲು ತಂದ ಮಧ್ಯಂತರ ಆದೇಶದಿಂದಾಗಿ ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗಿದ್ದಾಗ್ಯೂ ಕಾರ್ಯಭಾರದ ಕೊರತೆಯಿಂದಾಗಿ ಬಿಡುಗಡೆ ಹೊಂದಿದ್ದ ಹಲವಾರು ಅತಿಥಿ ಉಪನ್ಯಾಸಕರು ಸಹ ಮಾನ್ಯ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿ, ತಮ್ಮ ಸೇವೆಯನ್ನು ಮುಂದುವರೆಸುವಂತೆ ಮಧ್ಯಂತರ ಆದೇಶ ಪಡೆದಿರುತ್ತಾರೆ. ಸದರಿ ರಿಟ್ ಅರ್ಜಿಗಳು ನ್ಯಾಯಾಲಯದಲ್ಲಿ ಇನ್ನೂ ಬಾಕಿ ಇದ್ದು, ಅಂತಿಮ ತೀರ್ಪು ಹೊರಡಿಸಿರುವುದಿಲ್ಲ.

ಈ ಹಿನ್ನೆಲೆಯಲ್ಲಿ, ಪ್ರಸಕ್ತ ಸಾಲಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡಿರುವುದಿಲ್ಲ. ಆದರೆ, ಸರ್ಕಾರದ ಪತ್ರ ಸಂಖ್ಯೆ: ಇಡಿ 305 ಡಿಸಿಇ 2022(ಇ), ದಿನಾಂಕ:07-12-2022 ರಲ್ಲಿ ಈ ಹಿಂದಿನ 2021-22ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರ ಸೇವಾ ಅವಧಿಯನ್ನು ಡಿಸೆಂಬರ್ 2022 ರ ಅಂತ್ಯದವರೆಗೆ ವಿಸ್ತರಿಸಲು ಅನುಮೋದನೆ ನೀಡಲಾಗಿದೆ.

ವಿಶ್ವವಿದ್ಯಾಲಯಗಳ ಹಂತದಲ್ಲಿ ಯುಜಿಸಿಯು ದಿನಾಂಕ:28.01.2019ರಂದು ಹೊರಡಿಸಿರುವ ಮಾರ್ಗಸೂಚಿಯನ್ವಯ ಪ್ರತಿ ಉಪನ್ಯಾಸಕ್ಕೆ ರೂ.1500/- ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ.50000/- ಮೀರದಂತೆ ಗೌರವಧನವನ್ನು ನಿಗಧಿಪಡಿಸಲು ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರಾಚ್ಯೂಟಿ, ರಜೆ ಹಾಗೂ ಇನ್ನಿತರೇ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲ. ಅದರಂತೆ ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ.

# ಅನುಬಂಧ-1

<table>
<tr><th>ಕ್ರಮ ಸಂಖ್ಯೆ</th><th>ವಿಶ್ವವಿದ್ಯಾಲಯಗಳ ಹೆಸರು</th><th>ಷರಾ</th></tr>
<tr><td>1)</td><td>ಮೈಸೂರು ವಿಶ್ವವಿದ್ಯಾಲಯ, ಮೈಸೂರು</td><td>ಮೈಸೂರು ವಿಶ್ವವಿದ್ಯಾಲಯದಲ್ಲಿ 12 ಗಂಟೆಗಳ ಬೋಧನಾ ಕಾರ್ಯಭಾರವನ್ನು ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ಮಾಹೆಯಾನ ಒಂದು ದಿವಸ ಮತ್ತು 8 ಗಂಟೆಗಳ ಬೋಧನಾ ಕಾರ್ಯಭಾರವನ್ನು ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ಅರ್ಧದಿವಸದ ಸಾಂದರ್ಭಿಕ ರಜೆಯನ್ನು ನೀಡಲಾಗುತ್ತಿದೆ.<br><br>ಅತಿಥಿ ಉಪನ್ಯಾಸಕರಿಗೆ ಈ ಕೆಳಕಂಡಂತೆ ವೇತನವನ್ನು ಪಾವತಿಸಲಾಗುತ್ತಿದೆ.<br><br>
<table>
<tr><th>ವಾರಕ್ಕೆ ನಿಗದಿಪಡಿಸಿರುವ ಕಾರ್ಯಭಾರ (ಗಂಟೆಗಳಲ್ಲಿ)</th><th>SET/SLET/Ph.D. ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರ ಸಂಭಾವನೆ</th><th>NET/SLET/Ph.D. ವಿದ್ಯಾರ್ಹತೆ ಹೊಂದಿರದ ಅತಿಥಿ ಉಪನ್ಯಾಸಕರ ಸಂಭಾವನೆ</th></tr>
<tr><td>4 ಗಂಟೆ</td><td>8,500/-</td><td>8,000/-</td></tr>
<tr><td>8 ಗಂಟೆ</td><td>18,500/-</td><td>16,000/-</td></tr>
<tr><td>12 ಗಂಟೆ</td><td>28,000/-</td><td>24,000/-</td></tr>
</table>
</td></tr>
<tr><td>2)</td><td>ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ</td><td>ಕರ್ನಾಟಕ ವಿಶ್ವವಿದ್ಯಾಲಯದಲ್ಲಿ 2022-23ನೇ ಸಾಲಿಗೆ ಯುಜಿಸಿ ವಿದ್ಯಾರ್ಹತೆ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ರೂ.18,000 ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿಲ್ಲದಿರುವ ಅತಿಥಿ ಉಪನ್ಯಾಸಕರಿಗೆ ರೂ.16,000ಗಳ ವೇತನವನ್ನು ಪಾವತಿಸಲಾಗುತ್ತಿದೆ.</td></tr>
<tr><td>3)</td><td>ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು</td><td>ಬೆಂಗಳೂರು ವಿಶ್ವವಿದ್ಯಾಲಯದ ಅತಿಥಿ ಉಪನ್ಯಾಸಕರಿಗೆ 2021 ರಲ್ಲಿ ಗೌರವಧನವನ್ನು UGC ಮಾರ್ಗಸೂಚಿಗಳನ್ವಯ ಹಾಗೂ ಸಿಂಡಿಕೇಟ್ ಪ್ರಾಧಿಕಾರದ ಅನುಮೋದನೆಯನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.<br><br>
<table>
<tr><td>a)</td><td>Rs.780/- per one hour lecture subject to a maximum of Rs.49,920/- for Guest Lecturers with NET/SLET/Ph.D qualification.</td></tr>
<tr><td>b)</td><td>Rs.680/- per one hour lecture subject to a maximum of Rs.43,520/- for Guest Lecturers without NET/SLET/Ph.D qualification</td></tr>
</table>
<br>ಅತಿಥಿ ಉಪನ್ಯಾಸಕರ ಸೇವೆಯನ್ನು ತಾತ್ಕಲಿಕವಾಗಿ ಎಂದು ಪರಿಗಣಿಸಿರುವುದರಿಂದ ಗೌರವಧನ ಹೊರತುಪಡಿಸಿ ಮತ್ತಾವುದೇ ಸೌಲಭ್ಯಗಳನ್ನು ನೀಡುವುದಿಲ್ಲ.</td></tr>
</table>

<table>
<tr>
<td>4)</td>
<td>ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ</td>
<td>
<table>
<tr><th>Qualification</th><th colspan="2">Revised Honorarium/pay</th></tr>
<tr><td>Full Time (16 Hours/Week)</td><td>Above 5 years experience as Guest Lecturer</td><td>Below 5 years experience guest Lecturer</td></tr>
<tr><td>PG+Ph.D/NET/SLET/K-SET</td><td>Rs.750/Hour Capping of Rs.36,000/- P.M.</td><td>Rs.750/Hour Capping of Rs.34,000/- P.M.</td></tr>
<tr><td>PG+NET/SLET/K-SET</td><td>Rs.675/Hour Capping of Rs.32,000/- P.M.</td><td>Rs.675/Hour Capping of Rs.30,000/- P.M.</td></tr>
<tr><td>Part Time (Less than 16 Hours/Week)</td><td></td><td></td></tr>
<tr><td>PG+Ph.D/NET/SLET/K-SET</td><td>Rs.750/Hour Capping of Rs.26,000/- P.M.</td><td>Rs.750/Hour Capping of Rs.24,000/- P.M.</td></tr>
<tr><td>PG+NET/SLET/K-SET</td><td>Rs.675/Hour Capping of Rs.22,000/- P.M.</td><td>Rs.675/Hour Capping of Rs.20,000/- P.M.</td></tr>
<tr><td>Post-Graduate only</td><td>Rs.500/Hour Capping of Rs.16,000/- P.M.</td><td>Rs.500/Hour Capping of Rs.15,000/- P.M.</td></tr>
</table>
</td>
</tr>
<tr>
<td>5)</td>
<td>ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು</td>
<td>
ಅತಿಥಿ ಉಪನ್ಯಾಸಕರಿಗೆ ವೇತನವನ್ನು ಮಂಗಳೂರು ವಿಶ್ವವಿದ್ಯಾಲಯದಲ್ಲಿ ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.
<table>
<tr><td>ಅ)</td><td>14-16 ಗಂಟೆಗಳ ಬೋಧನ ಅವಧಿಗೆ ಗರಿಷ್ಠ ರೂ.40,000/-</td></tr>
<tr><td>ಆ)</td><td>8-14 ಗಂಟೆಗಳ ಬೋಧನ ಅವಧಿಗೆ ಗರಿಷ್ಠ ರೂ.35,000/-</td></tr>
</table>
</td>
</tr>
<tr>
<td>6)</td>
<td>ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ</td>
<td>
ಕುವೆಂಪು ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳು, ಸ್ನಾತಕೋತ್ತರ ಕೇಂದ್ರ, ಘಟಕ ಕಾಲೇಜುಗಳು, ಹಾಗೂ ನೇರ ಆಡಳಿತಗೊಳಪಟ್ಟ ಕಾಲೇಜುಗಳಲ್ಲಿ ಸೇವೆಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಮಾಸಿಕ ಸಂಭಾವನೆಯನ್ನು 2021-22ನೇ ಶೈಕ್ಷಣಿಕ ಸಾಲಿಗೆ ಗರಿಷ್ಠ 10 ತಿಂಗಳ ಮಿತಿಗೆ ಒಳಪಟ್ಟು ಏಪ್ರಿಲ್ 2022 ರ ಮಾಹೆಯಿಂದ ಅನ್ವಯವಾಗುವಂತೆ ಈ ಕೆಳಕಂಡಂತೆ, ಪರಿಷ್ಕರಿಸಲಾಗಿದೆ.
<table>
<tr><th>ಕ್ರ. ಸಂ.</th><th>ವಿವರ</th><th>ಚಾಲ್ತಿಯಲ್ಲಿರುವ ಸಂಭಾವನೆ ದರ</th><th>ಪರಿಷ್ಕರಿಸಲಾಗಿರುವ ಸಂಭಾವನೆ ದರ.</th></tr>
<tr><td>1.</td><td>15 ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸರುವ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿರುವ</td><td>ರೂ. 20.700/-</td><td>ರೂ. 45,000/-</td></tr>
<tr><td>2</td><td>15 ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸರುವ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿಲ್ಲದ</td><td>ರೂ. 17,250/-</td><td>ರೂ. 40,000/-</td></tr>
<tr><td>3</td><td>10 ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸರುವ 15 ವರ್ಷಕ್ಕಿಂತ ಕಡಿಮೆ</td><td>ರೂ. 20,700/-</td><td>ರೂ. 38,000/-</td></tr>
</table>
</td>
</tr>
</table>

| | | | | | |
|---|---|---|---|---|---|
| | | | ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿರುವ | | |
| | | 4 | 10 ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸರುವ 15 ವರ್ಷಕ್ಕಿಂತ ಕಡಿಮೆ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿಲ್ಲದ | ರೂ. 17,250/- | ರೂ. 36,000/- |
| | | 5 | 5 ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸರುವ 10 ವರ್ಷಕ್ಕಿಂತ ಕಡಿಮೆ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿರುವ | ರೂ. 20,700/- | ರೂ. 35,000/- |
| | | 6 | 5 ವರ್ಷ ಮತ್ತು ಅದಕ್ಕಿಂತ ಹೆಚ್ಚು ಸೇವೆ ಸಲ್ಲಿಸರುವ 10 ವರ್ಷಕ್ಕಿಂತ ಕಡಿಮೆ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿಲ್ಲದ | ರೂ. 17,250/- | ರೂ. 33,000/- |
| | | 7 | 5 ವರ್ಷಗಳಿಗಿಂತ ಕಡಿಮೆ ಸೇವೆ ಸಲ್ಲಿಸರುವ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿರುವ | ರೂ. 20,700/- | ರೂ. 31,000/- |
| | | 8 | 5 ವರ್ಷಗಳಿಗಿಂತ ಕಡಿಮೆ ಸೇವೆ ಸಲ್ಲಿಸರುವ ಮತ್ತು ಯುಜಿಸಿ ವಿದ್ಯಾರ್ಹತೆ ಹೊಂದಿಲ್ಲದ | ರೂ. 17,250/- | ರೂ. 30,000/- |
| 7) | ಕನ್ನಡ ವಿಶ್ವವಿದ್ಯಾಲಯ, ಹಂಪಿ | ಕನ್ನಡ ವಿಶ್ವವಿದ್ಯಾಲಯ, ಹಂಪಿ ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಅವರುಗಳು ಸಲ್ಲಿಸಿರುವ ಸೇವಾ ಅವಧಿ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ಅರ್ಹತಾ ಪರೀಕ್ಷೆಗಳ ಆಧಾರದ ಮೇಲೆ ವಿವಿಧ ಹಂತಗಳಲಿ ಗೌರವಧನವನ್ನು ನಿಗಧಿಪಡಿಸಲಾಗಿದೆ. | | | |
| 8) | ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಮೈಸೂರು | ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ರೂ.40,000 ಗಳಿಂದ ರೂ:45,000 ಗಳಿಗೆ ವೇತನ ಪರಿಷ್ಕರಣೆ ಮಾಡಲಾಗಿದೆ.<br>ಸಾರ್ವಜನಿಕ ರಜಾ ಹಾಗೂ ತಿಂಗಳಿಗೊಂದು ಸಾಂದರ್ಭಿಕ ರಜೆಯನ್ನು ನೀಡಲಾಗುತ್ತಿದೆ. | | | |

<table>
<tr>
<td>9)</td>
<td>ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ</td>
<td>ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಈ ಕೆಳಕಂಡಂತೆ ವೇತನ ಪರಿಷ್ಕರಿಸಲಾಗಿದೆ.
<table>
<tr><th>ಅತಿಥಿ ಉಪನ್ಯಾಸಕರು</th><th>ವಿದ್ಯಾರ್ಹತೆ</th><th>ಪ್ರಸ್ತುತ ನೀಡುತ್ತಿರುವ ವೇತನ</th><th>ಪರಿಷ್ಕೃತ ವೇತನ</th></tr>
<tr><td rowspan="3">ಪೂರ್ಣಕಾಲಿಕ ಅತಿಥಿ ಉಪನ್ಯಾಕರು</td><td>NET or SLET with Ph.D</td><td>ರೂ.25,000/-</td><td>ರೂ.26,000/-</td></tr>
<tr><td>NET or SLET or Ph.D</td><td>ರೂ.22,000/-</td><td>ರೂ.23,000/-</td></tr>
<tr><td>ಕೇವಲ ಸ್ನಾತಕೋತ್ತರ ಪದವಿ (55%) ಮುಗಿಸಿದವರಿಗೆ</td><td>ರೂ.20,000/-</td><td>ರೂ.21,000/-</td></tr>
<tr><td rowspan="3">ಅರೆಕಾಲಿಕ ಅತಿಥಿ ಉಪನ್ಯಾಸಕರು</td><td>NET or SLET with Ph.D</td><td>8,500/-</td><td rowspan="2">10,500/-</td></tr>
<tr><td>NET or SLET or Ph.D</td><td></td></tr>
<tr><td>ಕೇವಲ ಸ್ನಾತಕೋತ್ತರ ಪದವಿ (55%) ಮುಗಿಸಿದವರಿಗೆ</td><td>8,000/-</td><td>10,000/-</td></tr>
</table>
</td>
</tr>
<tr>
<td>10)</td>
<td>ತುಮಕೂರು ವಿಶ್ವವಿದ್ಯಾಲಯ, ತುಮಕೂರು</td>
<td>ತುಮಕೂರು ವಿಶ್ವವಿದ್ಯಾಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ NET/SLET/Ph.D ಹೊಂದಿರುವವರಿಗೆ 35,000 ಹಾಗೂ NET/SLET/Ph.D ಹೊಂದಿಲ್ಲದವರಿಗೆ 28,000 ಗಳ ಮಾಸಿಕ ಗೌರವ ಸಂಭಾವನೆಯನ್ನು ಪಾವತಿಸಲಾಗುತ್ತಿದೆ.</td>
</tr>
<tr>
<td>11)</td>
<td>ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು</td>
<td>NET/SLET/Ph.D ವಿದ್ಯಾರ್ಹತೆ ಹೊಂದಿರುವ ಉಪನ್ಯಾಸಕರಿಗೆ ಮಾಸಿಕ 25,000 ಗಳನ್ನು, NET/SLET/Ph.D ವಿದ್ಯಾರ್ಹತೆ ಹೊಂದಿರದ ಉಪನ್ಯಾಸಕರಿಗೆ ಮಾಸಿಕ ರೂ.22,000 ಹಾಗೂ ಭಾಷಾ ಉಪನ್ಯಾಸಕರಿಗೆ NET/SLET/ ವಿದ್ಯಾರ್ಹತೆ ಹೊಂದಿದ್ದರೆ 15,000 ಗಳು ಹಾಗೂ ಸದರಿ ವಿದ್ಯಾರ್ಹತೆ ಹೊಂದಿರದ ಉಪನ್ಯಾಸಕರಿಗೆ 11,500/-ಗಳ ಮಾಸಿಕ ಗೌರವಧನವನ್ನು ಪಾವತಿಸಲಾಗುತ್ತಿದೆ.</td>
</tr>
</table>

<table>
<tr>
<td>12)</td>
<td>ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ</td>
<td>ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಈ ಕೆಳಕಂಡಂತೆ ವೇತನ ಪರಿಷ್ಕರಿಸಲಾಗಿದೆ.
<table>
<tr><th></th><th>ಪೂರ್ಣಕಾಲಿಕ</th><th>ಅರೆಕಾಲಿಕ</th></tr>
<tr><td>ಸ್ನಾತಕೋತ್ತರ (PG) ಅತಿಥಿ ಉಪನ್ಯಾಸಕರು:<br>1. Ph.D/ NET/SLET ಪದವಿಧರರಿಗೆ<br>2. M.phil ಪದವಿಧರರಿಗೆ</td><td>ರೂ.22,000/-<br>ರೂ.15,000/-</td><td>ರೂ.11,000/-<br>ರೂ.7,500/-</td></tr>
<tr><td>ಸ್ನಾತಕ ಪದವಿಗೆ (UG)ಅತಿಥಿ ಉಪನ್ಯಾಸಕರು :<br>1. Ph.D/ NET/SLET ಪದವಿಧರರಿಗೆ<br>2. M.phil ಪದವಿಧರರಿಗೆ</td><td>ಗಂಟೆಗೆ ರೂ.730/-<br>ಗಂಟೆಗೆ ರೂ.500/-</td><td>ಗಂಟೆಗೆ ರೂ.365/-<br>ಗಂಟೆಗೆ ರೂ.250/-</td></tr>
</table>
</td>
</tr>
<tr>
<td>13)</td>
<td>ವಿಜಯನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ</td>
<td>ವಿಜಯನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯದಲ್ಲಿ ಅತಿಥಿ ಉಪನ್ಯಾಸಕರಿಗೆ ವೇತನ ಪರಿಷ್ಕರಣೆ ಮಾಡಲಾಗಿದೆ. ಹಾಗೂ ಪ್ರತಿ ತಿಂಗಳಿಗೊಮ್ಮೆ ಒಂದು ಸಾಮಾನ್ಯ ರಜೆಯನ್ನು ನೀಡಲಾಗುತ್ತಿದೆ.</td>
</tr>
<tr>
<td>14)</td>
<td>ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ</td>
<td>ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಹಾಗೂ ವಿಶ್ವವಿದ್ಯಾಲಯದ ಘಟಕ ಬೆಳಗಾವಿಯಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021 ದಿನಾಂಕ:14-01-2022 ರನ್ವಯ ಈ ಕೆಳಕಂಡಂತೆ ವೇತನ ಪರಿಷ್ಕರಣೆ ಮಾಡಲಾಗಿದೆ.
<table>
<tr><td>ಅ)</td><td>5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-</td></tr>
<tr><td>ಆ)</td><td>5 ವರ್ಷ ಮತ್ತು ಅದಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-</td></tr>
<tr><td>ಇ)</td><td>5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-</td></tr>
<tr><td>ಈ)</td><td>5 ವರ್ಷ ಮತ್ತು ಅದಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-</td></tr>
</table>
ಯು.ಜಿ.ಸಿ. ನಿಯಮಾನುಗಳನ್ವಯ ವೇತನದ ಹೊರತು ಯಾವುದೇ ಸೌಲಭ್ಯಗಳನ್ನು ನೀಡಲಾಗುತ್ತಿಲ್ಲ.</td>
</tr>
</table>

| | | |
|---|---|---|
| 15) | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021 ದಿನಾಂಕ:14-01-2022 ರನ್ವಯ ಈ ಕೆಳಕಂಡಂತೆ ವೇತನ ಪರಿಷ್ಕರಣೆ ಮಾಡಲಾಗಿದೆ.<br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-<br>ಆ) 5 ವರ್ಷ ಮತ್ತು ಅದಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-<br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-<br>ಈ) 5 ವರ್ಷ ಮತ್ತು ಅದಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- |
| 16) | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಹಾವೇರಿ ಜಿಲ್ಲೆ | ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ 2022-23ನೇ ಸಾಲಿನ ಅತಿಥಿ ಉಪನ್ಯಾಸಕರ ತಾತ್ಕಾಲಿಕ ನೇಮಕಾತಿ ನಡೆಯುತ್ತಿದೆ. ಸದರಿಯವರ ವೇತನ ಪರಿಷ್ಕರಣೆ ಮಾಡಿ ಯು.ಜಿ.ಸಿ. ನಿಯಮಾನುಸಾರ ಸವಲತ್ತುಗಳನ್ನು ನೀಡಲಾಗುತ್ತಿದೆ. |
| 17) | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಈ ಕೆಳಕಂಡಂತೆ ವೇತನ ಪರಿಷ್ಕರಿಸಲಾಗಿದೆ.<br>• NET/SLETಅಥವಾ Ph.Dಪದವೀಧರರಿಗೆ ಪ್ರತಿ ಗಂಟೆಗೆ ರೂ.780/- ರಂತೆ ತಿಂಗಳಿಗೆ ಗರಿಷ್ಠ ರೂ. 49,920/-<br>• NET/SLETಅಥವಾ Ph.Dಪದವೀಧರರಿಗೆ ಪ್ರತಿ ಗಂಟೆಗೆ ರೂ.680/- ರಂತೆ ತಿಂಗಳಿಗೆ ಗರಿಷ್ಠ ರೂ. 43,520/- |
| 18) | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ | ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಈ ಕೆಳಕಂಡಂತೆ ವೇತನ ಪರಿಷ್ಕರಿಸಲಾಗಿದೆ.<br>• NET/SLET/Ph.D ಇಲ್ಲದವರಿಗೆ ಪ್ರತಿ ಗಂಟೆಗೆ ರೂ.680/- ಪಾವತಿಸಲಾಗುತ್ತದೆ.<br>• NET/SLET/Ph.D ಹೊಂದಿರುವ ಪ್ರತಿ ಗಂಟೆಗೆ ರೂ.780/- ಪಾವತಿಸಲಾಗುತ್ತದೆ.<br>ಸದರಿಯವರಿಗೆ ವೇತನ ಪರಿಷ್ಕರಣೆ ಮಾಡಿ ಯು.ಜಿ.ಸಿ. ನಿಯಮಾನುಗಳನ್ವಯ ಸವಲತ್ತು ನೀಡಲಾಗುತ್ತಿದೆ. |
| 19) | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | ಮಂಡ್ಯ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಕಾಲೇಜು ಶಿಕ್ಷಣ ಇಲಾಖೆಯಿಂದ ಆಯ್ಕೆಯಾಗಿರುತ್ತಾರೆ. ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆ ನೀಡಲಾಗುತ್ತಿರವ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ಕಲ್ಪಿಸಲಾಗಿದೆ. |

| | | |
|---|---|---|
| 20) | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಕಾಲೇಜು ಶಿಕ್ಷಣ ಇಲಾಖೆಯಿಂದ ಆಯ್ಕೆಯಾಗಿರುತ್ತಾರೆ. ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆ ನೀಡಲಾಗುತ್ತಿರವ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ಕಲ್ಪಿಸಲಾಗಿದೆ. |
| 21) | ಡಾ.ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು | ಡಾ.ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ವಿಶ್ವವಿದ್ಯಾಲಯದಲ್ಲಿ ಅಗತ್ಯತೆಗನುಗುಣವಾಗಿ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದು, ಅವರಿಗೆ ಒಂದು ಗಂಟೆ ಅವಧಿಗೆ ರೂ.2,000/- ರಂತೆ (offline ಮೂಲಕ) ಮತ್ತು ರೂ.1,500/- ರಂತೆ (online ಮೂಲಕ)ಗೌರವಧನ ಪಾವತಿಸಲಾಗುತ್ತಿದೆ. |
| 22) | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು | ರಾಯಚೂರು ವಿಶ್ವವಿದ್ಯಾಲಯದಲ್ಲಿ ಮಾತೃ ವಿಶ್ವವಿದ್ಯಾಲಯವಾದ ಗುಲಬರ್ಗಾ ವಿಶ್ವವಿದ್ಯಾಲಯ ಪಾವತಿಸುತ್ತಿದ್ದಂತೆ ಅತಿಥಿ ಉಪನ್ಯಾಸಕರ ಗೌರವಧನ ಪ್ರತಿ ತಿಂಗಳು ಗರಿಷ್ಠ ರೂ.36,000/- ಗಳನ್ನು ಪಾವತಿಸಲಾಗಿದೆ. |
| 23) | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | ನೃಪತುಂಗ ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಕಾಲೇಜು ಶಿಕ್ಷಣ ಇಲಾಖೆಯಿಂದ ಆಯ್ಕೆಯಾಗಿರುತ್ತಾರೆ. ಆದುದರಿಂದ, ಕಾಲೇಜು ಶಿಕ್ಷಣ ಇಲಾಖೆ ನೀಡಲಾಗುತ್ತಿರವ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ಕಲ್ಪಿಸಲಾಗಿದೆ.<br><br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-<br>ಆ) 5 ವರ್ಷ ಮತ್ತು ಅದಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-<br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-<br>ಈ) 5 ವರ್ಷ ಮತ್ತು ಅದಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಯು.ಜಿಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/- |

## ಅನುಬಂಧ-2

| ಕ್ರಮ ಸಂಖ್ಯೆ | ವಿಶ್ವವಿದ್ಯಾಲಯಗಳ ಹೆಸರು | ವಿಶ್ವವಿದ್ಯಾಲಯಗಳಲ್ಲಿ ತಾತ್ಕಾಲಿಕವಾಗಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|
| 1) | ಮೈಸೂರು ವಿಶ್ವವಿದ್ಯಾಲಯ, ಮೈಸೂರು | 936 |
| 2) | ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | ಕೋರ್ಸ್ – ಅತಿಥಿ ಉಪನ್ಯಾಸಕರು<br>ಸ್ನಾತಕ – 119<br>ಸ್ನಾತಕೋತ್ತರ/ಇತರೆ – 101 |
| 3) | ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು | 75 |
| 4) | ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | 254 |
| 5) | ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | • ವಿಶ್ವವಿದ್ಯಾಲಯದ ಘಟಕ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು- 203<br>• ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿಭಾಗಗಳು/ಪಿ.ಜಿ.ಸೆಂಟರ್ ಮತ್ತು ಘಟಕ ಕಾಲೇಜುಗಳ ಸ್ನಾತಕೋತ್ತರ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರು- 260 |
| 6) | ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ, ಶಿವಮೊಗ್ಗ | 2022-23ನೇ ಸಾಲಿಗೆ ಸ್ನಾತಕ ಮತ್ತು ಸ್ನಾತಕೋತ್ತರ ಪದವಿಗಳ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯಲು ಅರ್ಜಿಯನ್ನು ಆಹ್ವಾನಿಸಲಾಗಿದೆ. |
| 7) | ಕನ್ನಡ ವಿಶ್ವವಿದ್ಯಾಲಯ, ಹಂಪಿ | 22 |
| 8) | ಕರ್ನಾಟಕ ರಾಜ್ಯಮುಕ್ತ ವಿಶ್ವವಿದ್ಯಾಲಯ, ಮೈಸೂರು | 02 |
| 9) | ಅಕ್ಕಮಹಾದೇವಿ ಮಹಿಳಾ | 93 |

| | | |
|---|---|---|
| | ವಿಶ್ವವಿದ್ಯಾಲಯ, ವಿಜಯಪುರ | |
| 10) | ತುಮಕೂರು ವಿಶ್ವವಿದ್ಯಾಲಯ, ತುಮಕೂರು | 223 |
| 11) | ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು | 15 ಅತಿಥಿ ಉಪನ್ಯಾಸಕರು<br>04 ಅರೆಕಾಲಿಕ ಉಪನ್ಯಾಸಕರು |
| 12) | ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ | 2022-23ನೇ ಸಾಲಿನ ಅತಿಥಿ ಉಪನ್ಯಾಸಕರನ್ನು ತೆಗೆದುಕೊಳ್ಳುವ ಪ್ರಕ್ರಿಯೆಯು ಜಾರಿಯಲ್ಲಿದೆ. |
| 13) | ವಿಜಯನಗರ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | 109 |
| 14) | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 47 |
| 15) | ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು | 04 |
| 16) | ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಹಾವೇರಿ ಜಿಲ್ಲೆ | 2022-23ನೇ ಶೈಕ್ಷಣಿಕ ಸಾಲಿನ ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ತೆಗೆದುಕೊಳ್ಳುವ ಪ್ರಕ್ರಿಯೆಯು ಜಾರಿಯಲ್ಲಿದೆ. |
| 17) | ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು | 182 |
| 18) | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ | 42 |
| 19) | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 122 |
| 20) | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | 136 |
| 21) | ಡಾ.ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ, ಬೆಂಗಳೂರು | 07 |
| 22) | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು | 2022-23ನೇ ಸಾಲಿಗೆ ಅವಶ್ಯಕವಿರುವ 81 ಅತಿಥಿ ಉಪನ್ಯಾಸಕರನ್ನು ತೆಗೆದುಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆ. |
| 23) | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | 71 |

II

**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) ಇವರ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 80 (782) ಕ್ಕೆ ಪೂರಕ ಟಿಪ್ಪಣಿ.</u>**

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು ಆಯಾ ಶೈಕ್ಷಣಿಕ ವರ್ಷಕ್ಕೆ ಮಾತ್ರ ಸೀಮಿತಗೊಳಿಸಿ, ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲಾಗುತ್ತಿದೆ.

ಅತಿಥಿ ಉಪನ್ಯಾಸಕರಿಗೆ ಕಲಾ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಗರಿಷ್ಠ 8 ಗಂಟೆಗಳ ಕಾರ್ಯಭಾರವನ್ನು ಮತ್ತು ವಿಜ್ಞಾನ & ಪ್ರಾಯೋಗಿಕ ತರಗತಿಗಳನ್ನು ನಿರ್ವಹಿಸುವ ವಿಷಯಗಳಲ್ಲಿ ಗರಿಷ್ಠ 10 ಗಂಟೆಗಳ ಕಾರ್ಯಭಾರವನ್ನು ನಿಗಧಿಪಡಿಸಲಾಗಿತ್ತು. ಅದರಂತೆ ಅತಿಥಿ ಉಪನ್ಯಾಸಕರಿಗೆ ರೂ.13,000/- (ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ) ಮತ್ತು ರೂ.11,000/- (ಯು.ಜಿ.ಸಿ. ವಿದ್ಯಾರ್ಹತೆ ಹೊಂದಿಲ್ಲದವರಿಗೆ) ಗಳ ಸಂಭಾವನೆಯನ್ನು ನಿಗಧಿಪಡಿಸಲಾಗಿತ್ತು.

ಪ್ರಸ್ತುತ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 & 24.01.2022 ರನ್ವಯ ಮಾಹೆಯಾನ ಗೌರವಧನವನ್ನು 2021-22ನೇ ಶೈಕ್ಷಣಿಕ ಸಾಲಿನಿಂದ ಪರಿಷ್ಕರಿಸಿ ಈ ಕೆಳಗಿನಂತೆ ನಿಗದಿಪಡಿಸಲಾಗಿದೆ;

- 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-.

- 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-.

- 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-.

- 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-.

ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಕಾರ್ಯಭಾರದ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಲಾಗಿದೆ. ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಪ್ರಾಧಾನ್ಯತೆ ನೀಡಲಾಗಿದ್ದು, ಅವರನ್ನು ಸೆಮಿಸ್ಟರ್‌ಗೆ ಬದಲಾಗಿ

ಶೈಕ್ಷಣಿಕ ವರ್ಷಕ್ಕೆ(10 ತಿಂಗಳಿಗೆ) ನೇಮಕ ಮಾಡಿಕೊಳ್ಳಲಾಗುತ್ತಿದೆ. ಅಲ್ಲದೆ, ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 03 ವರ್ಷಗಳ ಕಾಲಾವಕಾಶ ನೀಡಲಾಗಿದೆ.

ಈ ಹಿಂದೆ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸಿ, ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗದ ಅಭ್ಯರ್ಥಿಗಳು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದ ಮೂರು ಪೀಠಗಳಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿ, ತಮ್ಮನ್ನು ಅತಿಥಿ ಉಪನ್ಯಾಸಕರ ಸೇವೆಯಲ್ಲಿ ಮುಂದುವರೆಸುವಂತೆ ಕೋರಿದ್ದು, ಅದರಂತೆ ಮಾನ್ಯ ನ್ಯಾಯಾಲಯವು ವಿವಿಧ ದಿನಾಂಕಗಳಲ್ಲಿ ನೀಡಿರುವ ಮಧ್ಯಂತರ ಆದೇಶದಲ್ಲಿ ಅವರ ಸೇವೆಯನ್ನು ಮುಂದುವರೆಸಲು ನಿರ್ದೇಶನ ನೀಡಲಾಗಿರುತ್ತದೆ. ಅಲ್ಲದೆ, ಕೌನ್ಸಿಲಿಂಗ್‌ನಲ್ಲಿ ಆಯ್ಕೆಯಾಗದ ಅತಿಥಿ ಉಪನ್ಯಾಸಕರು ತಮ್ಮನ್ನು ಸೇವೆಯಲ್ಲಿ ಮುಂದುವರೆಸಲು ತಂದ ಮಧ್ಯಂತರ ಆದೇಶದಿಂದಾಗಿ ಕೌನ್ಸಿಲಿಂಗ್ ಮೂಲಕ ಆಯ್ಕೆಯಾಗಿದ್ದಾಗ್ಯೂ ಕಾರ್ಯಭಾರದ ಕೊರತೆಯಿಂದಾಗಿ ಬಿಡುಗಡೆ ಹೊಂದಿದ್ದ ಹಲವಾರು ಅತಿಥಿ ಉಪನ್ಯಾಸಕರು ಸಹ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿ, ತಮ್ಮ ಸೇವೆಯನ್ನು ಮುಂದುವರೆಸುವಂತೆ ಮಧ್ಯಂತರ ಆದೇಶ ಪಡೆದಿರುತ್ತಾರೆ. ಸದರಿ ರಿಟ್ ಅರ್ಜಿಗಳು ನ್ಯಾಯಾಲಯದಲ್ಲಿ ಇನ್ನೂ ಬಾಕಿ ಇದ್ದು, ಅಂತಿಮ ತೀರ್ಪು ಹೊರಡಿಸಿರುವುದಿಲ್ಲ.

ಈ ಹಿನ್ನೆಲೆಯಲ್ಲಿ, ಪ್ರಸಕ್ತ ಸಾಲಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಂಡಿರುವುದಿಲ್ಲ. ಆದರೆ, ಸರ್ಕಾರದ ಪತ್ರ ಸಂಖ್ಯೆ: ಇಡಿ 305 ಡಿಸಿಇ 2022(ಇ), ದಿನಾಂಕ:07-12-2022 ರಲ್ಲಿ ಈ ಹಿಂದಿನ 2021-22ನೇ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರ ಸೇವಾ ಅವಧಿಯನ್ನು ಡಿಸೆಂಬರ್ 2022 ರ ಅಂತ್ಯದವರೆಗೆ ವಿಸ್ತರಿಸಲು ಅನುಮೋದನೆ ನೀಡಲಾಗಿದೆ.

ವಿಶ್ವವಿದ್ಯಾಲಯಗಳ ಹಂತದಲ್ಲಿ ಯುಜಿಸಿಯು ದಿನಾಂಕ:28.01.2019ರಂದು ಹೊರಡಿಸಿರುವ ಮಾರ್ಗಸೂಚಿಯನ್ವಯ ಪ್ರತಿ ಉಪನ್ಯಾಸಕ್ಕೆ ರೂ.1500/- ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ.50000/- ಮೀರದಂತೆ ಗೌರವಧನವನ್ನು ನಿಗಧಿಪಡಿಸಲು ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರಾಚ್ಯುಟಿ, ರಜೆ ಹಾಗೂ ಇನ್ನಿತರೇ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲ. ಅದರಂತೆ ಸಾರ್ವಜನಿಕ ವಿಶ್ವವಿದ್ಯಾಲಯಗಳು ಅತಿಥಿ ಉಪನ್ಯಾಸಕರುಗಳಿಗೆ ಗೌರವಧನವನ್ನು ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ.